Bangalore
Regional News
26.09.2025 / 6.40 pm
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಕಾರ್ಯ ಚುರುಕುಗೊಳಿಸಲು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚನೆ

೨. ಸಮಾಜಕಲ್ಯಾಣ ಇಲಾಖೆಯಲ್ಲಿ ಭ್ರಷ್ಟಾಚಾರ ಆರೋಪ; ಲೋಕಾಯುಕ್ತ ತನಿಖೆಗೆ ಬಿಜೆಪಿ ಒತ್ತಾಯ

೩. ಗೃಹಜ್ಯೋತಿ ಗ್ರಾಹಕರಿಗೆ ಪರಿಷ್ಕೃತ ಬಿಲ್ ಶೀಘ್ರದಲ್ಲೇ ವಿತರಣೆ - ಬೆಸ್ಕಾಂ

೪. ಸ್ವಚ್ಛತಾ ಹಿ ಸೇವಾ ಅಭಿಯಾನ; ರಾಜ್ಯದ ವಿವಿಧೆಡೆ ಶ್ರಮದಾನದ ಮೂಲಕ ಜನರಲ್ಲಿ ಅರಿವು

*************

ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯದಲ್ಲಿ ಆರಂಭವಾಗಿರುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಕಾರ್ಯದಲ್ಲಿ ನಿರ್ಲಕ್ಷ್ಯ ವಹಿಸುವ ಗಣತಿದಾರರ ಮೇಲೆ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ -೨೦೨೫ರ ಪ್ರಗತಿ ಕುರಿತು ಎಲ್ಲಾ ಜಿಲ್ಲಾಧಿಕಾರಿಗಳೊಂದಿಗೆ ಇಂದು ವಿಡಿಯೋ ಸಂವಾದ ನಡೆಸಿದ ಮುಖ್ಯಮಂತ್ರಿ, ಈಗ ಎಲ್ಲಾ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲಾಗಿದ್ದು, ಇಂದಿನಿಂದ ಸಮೀಕ್ಷೆ ಕಾರ್ಯವನ್ನು ಚುರುಕುಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದರು. ಸಮೀಕ್ಷೆ ಕಾರ್ಯಕ್ಕೆ ಒಟ್ಟು ೧ ಲಕ್ಷದ ೨೦ ಸಾವಿರದ ೭೨೮ ಗಣತಿದಾರರನ್ನು ನಿಯೋಜಿಸಲಾಗಿದ್ದು, ಅಕ್ಟೋಬರ್ ೭ರ ಒಳಗಾಗಿ ಗಣತಿ ಕಾರ್ಯ ಪೂರ್ಣಗೊಳ್ಳಬೇಕು. ಯಾವುದೇ ಶಿಕ್ಷಕರು ಗಣತಿ ಕಾರ್ಯಕ್ಕೆ ಅಸಹಕಾರ ತೋರಿಸಬಾರದು. ನಿರ್ಲಕ್ಷ್ಯ ವಹಿಸುವ ಗಣತಿದಾರರ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಸಮೀಕ್ಷೆ ಕಾರ್ಯದ ಮೇಲ್ವಿಚಾರಣೆ ನಡೆಸಲು ಪ್ರತಿ ತಾಲೂಕಿಗೆ ಜಿಲ್ಲಾ ಮಟ್ಟದ ಅಧಿಕಾರಿಯನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡಲಾಗುವುದು. ಜಿಲ್ಲಾ ಮಟ್ಟದಲ್ಲಿ ಯಾವುದೇ ತಾಂತ್ರಿಕ ತೊಂದರೆಗಳು ಎದುರಾದರೆ ಸ್ಥಳೀಯವಾಗಿ ಸಮಸ್ಯೆ ಬಗೆಹರಿಸಲು ಜಿಲ್ಲಾ ಮಟ್ಟದಲ್ಲಿ ವಿವಿಧ ಇಲಾಖೆಗಳಲ್ಲಿರುವ ಐಟಿ ತಂತ್ರಜ್ಞರ ನೆರವನ್ನು ಪಡೆದುಕೊಳ್ಳಲಾಗುವುದು ಎಂದರು. ಬಿಬಿಎಂಪಿ ವ್ಯಾಪ್ತಿಯಲ್ಲಿ ಸುಮಾರು ೫೦ ಲಕ್ಷ ಮನೆಗಳಿದ್ದು, ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿ ಸಮೀಕ್ಷೆ ಕಾರ್ಯ ಇಂದಿನಿಂದ ಆರಂಭವಾಗಿದೆ. ರಾಜ್ಯದ ಪ್ರತಿಯೊಂದು ಕುಟುಂಬಗಳ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಬೇಕು. ಯಾವುದೇ ಕುಟುಂಬ ಸಮೀಕ್ಷೆಯಿಂದ ಹೊರಗುಳಿಯದಂತೆ ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು. ಗುಡ್ಡಗಾಡು ಪ್ರದೇಶಗಳ ವ್ಯಾಪ್ತಿಯಲ್ಲಿ ಶಾಲೆಗಳಲ್ಲಿ ಸಮೀಕ್ಷಾ ಕೇಂದ್ರಗಳನ್ನು ಆರಂಭಿಸಲು ಅವಕಾಶ ನೀಡಲಾಗಿದೆ. ಜನರು ಕೇಂದ್ರಕ್ಕೆ ಬಂದು ಸಮೀಕ್ಷೆ ಕಾರ್ಯದಲ್ಲಿ ಪಾಲ್ಗೊಳ್ಳಬಹುದಾಗಿದೆ. ಆನ್‌ಲೈನ್ ಮೂಲಕ ಸಹ ಸಮೀಕ್ಷೆ ಕಾರ್ಯದಲ್ಲಿ ಭಾಗಿಯಾಗಲು ಅವಕಾಶ ಕಲ್ಪಿಸಲಾಗಿದ್ದು, ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಮುಖ್ಯಮಂತ್ರಿ ಮನವಿ ಮಾಡಿದರು. ಸಮೀಕ್ಷೆ ಸಂದರ್ಭದಲ್ಲಿ ಮನೆಗಳಿಗೆ

ಬೀಗ ಹಾಕಿದ್ದರೆ, ಅಂತಹ ಮನೆಗಳಲ್ಲೂ ಗಣತಿ ಕಾರ್ಯವನ್ನು ಮುಂದಿನ ದಿನಗಳಲ್ಲಿ ಕೈಗೊಳ್ಳಲು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು. ಪ್ರತಿ ದಿನ ಜಿಲ್ಲಾವಾರು ಕನಿಷ್ಠ ಶೇಕಡಾ ೧೦ರಷ್ಟು ಸಮೀಕ್ಷೆ ಗುರಿಯನ್ನು ಸಾಧಿಸಬೇಕು. ಪ್ರಾದೇಶಿಕ ಆಯುಕ್ತರು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಸಮೀಕ್ಷೆ ಪ್ರಗತಿಯ ಪರಿಶೀಲನೆ ನಡೆಸಬೇಕು ಎಂದು ಮುಖ್ಯಮಂತ್ರಿ ಸೂಚಿಸಿದರು.

*************

ರಾಜ್ಯದಲ್ಲಿ ಸಂವಿಧಾನಬದ್ಧವಾಗಿ ನಡೆಯುತ್ತಿರುವ ಸಾಮಾಜಿಕ- ಶೈಕ್ಷಣಿಕ ಸಮೀಕ್ಷೆಯಲ್ಲಿ ಕುರುಬ ಸಮುದಾಯ ಭಾಗಿಯಾಗಬೇಕು ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಾಜ್ಯಾಧ್ಯಕ್ಷ ಹೆಚ್.ಎಂ. ರೇವಣ್ಣ ಹೇಳಿದ್ದಾರೆ. ಸುದ್ದಿಗೋಷ್ಠಿಯಲ್ಲಿಂದು ಮಾತನಾಡಿದ ಅವರು, ಕಳೆದ ೧೯೩೧ ರಿಂದ ದೇಶದಲ್ಲಿ ಜಾತಿಗಣತಿ ಆಗಿಲ್ಲ. ಹಾವನೂರು ವರದಿ ಬಳಿಕ ಯಾವ ವರದಿಗಳು ಜಾರಿಯಾಗಿಲ್ಲ. ಹೀಗಾಗಿ ಸಮುದಾಯಗಳ ಸ್ಥಿತಿಗತಿ ತಿಳಿಯಬೇಕಿದೆ ಎಂದರು. ಇದು ಹಿಂದುಳಿದ ಜಾತಿಗಳ ಪ್ರಶ್ನೆ ಮಾತ್ರ ಅಲ್ಲ. ಎಲ್ಲಾ ಸಮುದಾಯಗಳ ಪರಿಸ್ಥಿತಿ ತಿಳಿಯಲಿದೆ. ಕುರುಬ ಸಮುದಾಯಗಳು ಈ ಸಮೀಕ್ಷೆಯಲ್ಲಿ ಭಾಗಿಯಾಗಬೇಕು. ಉಪಜಾತಿ ಬರೆಸುವುದು ಅವರ ವಿವೇಚನೆಗೆ ಬಿಟ್ಟಿದ್ದು ಎಂದು ಅವರು ಹೇಳಿದರು.

*************

ಸಮಾಜ ಕಲ್ಯಾಣ ಇಲಾಖೆಯಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆಯುತ್ತಿದ್ದು, ೧೪ ಸಾವಿರ ಕೋಟಿ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಲಾಗಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪರಿಶಿಷ್ಟಜಾತಿಗಳಿಗೆ ಮೀಸಲಿಟ್ಟ ಹಣವನ್ನು ಬೇರೆ ಇಲಾಖೆಗಳಿಗೆ ದುರ್ಬಳಕೆ ಮಾಡಲಾಗುತ್ತಿದೆ. ೧೧೨ ಕೋಟಿ ಟೆಂಡರ್‌ನಲ್ಲಿ ವಂಚನೆಯಾಗಿದೆ. ಈ ಕುರಿತು ಲೋಕಾಯುಕ್ತ ತನಿಖೆಗೆ ಆದೇಶ ನೀಡಬೇಕು ಎಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು. ಎಲ್ಲಾ ನಿಯಮಗಳನ್ನು ಗಾಳಿಗೆ ತೂರಿ ಅನುಭವವಿಲ್ಲದ ತರಬೇತಿ ಕೇಂದ್ರಗಳಿಗೆ ಟೆಂಡರ್ ನೀಡಲಾಗುತ್ತಿದೆ ಎಂದು ಆರೋಪಿಸಿದರು.

*************

ರಾಜ್ಯದಲ್ಲಿ ಕೈಗೊಳ್ಳಲಾಗಿರುವ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಮನೆಗಳನ್ನು ಗುರುತಿಸಿ ಪಟ್ಟಿ ಮಾಡುವ ಕಾರ್ಯಕ್ಕೆ ಬೆಸ್ಕಾಂ ಮೀಟರ್ ರೀಡರ್‌ಗಳು ನಿಯೋಜನೆಗೊಂಡಿದ್ದರಿಂದ ಕೆಲ ಗೃಹ ಜ್ಯೋತಿ ಗ್ರಾಹಕರ ಬಿಲ್‌ನಲ್ಲಿ ಆಗಿದ್ದ ವ್ಯತ್ಯಯವನ್ನು ಸರಿಪಡಿಸಿ ಪರಿಷ್ಕೃತ ಬಿಲ್ ವಿತರಿಸಲಾಗುವುದು ಎಂದು ಬೆಸ್ಕಾಂ ಸ್ಪಷ್ಟಪಡಿಸಿದೆ. ಸೆಪ್ಟೆಂಬರ್ ತಿಂಗಳಲ್ಲಿ ಮೀಟರ್ ರೀಡರ್‌ಗಳು ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಭಾಗವಾಗಿ ಮನೆಗಳನ್ನು ಪಟ್ಟಿ ಮಾಡುವ ಕಾರ್ಯ ಹಾಗೂ ಮೀಟರ್ ರೀಡಿಂಗ್‌ಅನ್ನು ಪ್ರೋಬ್‌ಗಳ ಮೂಲಕ ಮೊದಲ ಬಾರಿಗೆ ನಡೆಸುತ್ತಿರುವುದರಿಂದ ವಿದ್ಯುತ್ ಬಿಲ್ ವಿತರಣೆಯ ದಿನಾಂಕವನ್ನು ಸೆಪ್ಟೆಂಬರ್ ೧೫ನೇ ತಾರಿಕಿನಿಂದ ೨೫ನೇ ತಾರೀಕಿನವರೆಗೆ ವಿಸ್ತರಿಸಲಾಗಿದೆ. ಈ ಪ್ರಕ್ರಿಯೆಯಿಂದ ಕೆಲ ಪ್ರಕರಣಗಳಲ್ಲಿ ಗೃಹಜ್ಯೋತಿ ಗ್ರಾಹಕರಿಗೆ ಭಾಗಶಃ ಬಿಲ್ ಬಂದಿರುವುದು ಬೆಸ್ಕಾಂ ಗಮನಕ್ಕೆ ಬಂದಿದೆ. ಅವುಗಳನ್ನು ಕಳೆದ ತಿಂಗಳುಗಳ ಸರಾಸರಿಯಂತೆ ಲೆಕ್ಕ ಹಾಕಿ, ಪರಿಷ್ಕೃತ ಬಿಲ್ ನೀಡಲಾಗುತ್ತದೆ. ಈ ಮೂಲಕ ಗೃಹಜ್ಯೋತಿ ಫಲಾನುಭವಿಗಳಿಗೆ ಯೋಜನೆಯ ಲಾಭ ಪಡೆಯುವಲ್ಲಿ ಯಾವುದೇ ವ್ಯತ್ಯಯವಾಗದಂತೆ ಕ್ರಮವಹಿಸಲಾಗುವುದು ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

*************

ಕೇಂದ್ರ ಸರ್ಕಾರ ಜಿಎಸ್‌ಟಿ ತೆರಿಗೆಯನ್ನು ಇಳಿಸಿರುವುದರಿಂದ ಜನಸಾಮಾನ್ಯರ ಬಾಳು ಹಸನಾಗಿದೆ ಎಂದು ಬೆಂಗಳೂರು ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ವಿಭಾಗದ ಹಿರಿಯ ಪ್ರಾಧ್ಯಾಪಕ ಡಾ.ಎಸ್.ಆರ್. ಕೇಶವ ಅಭಿಪ್ರಾಯಪಟ್ಟಿದ್ದಾರೆ. ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡಿರುವ ಅವರು, ಜಿಎಸ್‌ಟಿ ಇಳಿಕೆಯಿಂದ ರೈತರು, ವಿದ್ಯಾರ್ಥಿಗಳಿಗೆ ತುಂಬಾ ಅನುಕೂಲವಾಗಿದೆ. ಅತ್ಯಗತ್ಯ ವಸ್ತುಗಳಿಗೆ ಜಿಎಸ್‌ಟಿಯಿಂದ ವಿನಾಯಿತಿ ಸಿಕ್ಕಿದ್ದು, ಇದೊಂದು ಕ್ರಾಂತಿಕಾರಕ ಸುಧಾರಣೆಯಾಗಿದೆ ಎಂದು ಹೇಳಿದರು.

ಧ್ವನಿ- ಡಾ.ಎಸ್.ಆರ್. ಕೇಶವ ೩೯ ಸೆಕೆಂಡುಗಳು

*************

ಸ್ವಚ್ಛತಾ ಹಿ ಸೇವಾ ೨೦೨೫ ಅಭಿಯಾನದ ಅಂಗವಾಗಿ ನೈಋತ್ಯ ರೈಲ್ವೆಯ ಬೆಂಗಳೂರು ವಿಭಾಗದಿಂದ ಇಂದು "ಏಕ್ ದಿನ್, ಏಕ್ ಘಂಟಾ, ಏಕ್ ಸಾಥ್" ಎಂಬ ಧ್ಯೇಯವಾಕ್ಯದಡಿಯಲ್ಲಿ ಶ್ರಮದಾನ ನಡೆಸಲಾಯಿತು. ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಪ್ರವೀಣ್ ಕಾತರಕಿ ನೇತೃತ್ವದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣದಲ್ಲಿ ನಡೆದ ಶ್ರಮದಾನದಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ಉತ್ಸಾಹದಿಂದ ಸ್ವಚ್ಛತಾ ಕಾರ್ಯದಲ್ಲಿ ಪಾಲ್ಗೊಂಡರು. ಸರ್ ಎಂ ವಿಶ್ವೇಶ್ವರಯ್ಯ ರೈಲು ನಿಲ್ದಾಣ, ಬೆಂಗಳೂರು ಕಂಟೋನ್ಮೆಂಟ್, ಯಶವಂತಪುರ, ಯಲಹಂಕ, ಕೃಷ್ಣರಾಜಪುರಂ, ಬಂಗಾರಪೇಟೆ ಮತ್ತು ಹಿಂದೂಪುರ ಸೇರಿದಂತೆ ಹಲವಾರು ಇತರ ನಿಲ್ದಾಣಗಳಲ್ಲಿಯೂ ಶ್ರಮದಾನ ಚಟುವಟಿಕೆಗಳನ್ನು ನಡೆಸಲಾಯಿತು. ಮುಖ್ಯ ವೈದ್ಯಕೀಯ ಅಧೀಕ್ಷಕಿ ಡಾ. ಪ್ರಭಾವತಿ ಗಜಲಕ್ಷ್ಮಿ ನೇತೃತ್ವದ ತಂಡವು ಬೆಂಗಳೂರಿನ ವಿಭಾಗೀಯ ರೈಲ್ವೆ ಆಸ್ಪತ್ರೆಯಲ್ಲಿ ಹೆಚ್ಚಿನ ಉತ್ಸಾಹದಿಂದ ಶ್ರಮದಾನವನ್ನು ನಡೆಸಿತು.

*************

ಶ್ರೀರಂಗಪಟ್ಟಣ ದಸರಾದ ಅಂಗವಾಗಿ ಶ್ರೀರಂಗಪಟ್ಟಣ ಪ್ರವಾಸೋದ್ಯಮವನ್ನು ಉತ್ತೇಜಿಸಲು "ಸ್ವಚ್ಚತೆಯೇ ಸೇವೆ" ೧೫ ದಿನಗಳ ಪಾಕ್ಷಿಕ ಅಭಿಯಾನ ನಡೆಸಲಾಗುತ್ತಿದೆ, ಮಂಡ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ ಆರ್ ನಂದಿನಿ ಅವರು ಸ್ವಚ್ಚತೆಯೇ ಸೇವೆ ಅಭಿಯಾನದ ಕುರಿತು ಸ್ಪರ್ಧಾಳುಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಬಳಿಕ ಮಾತನಾಡಿದ ಅವರು, ನೀರು ಅಮೂಲ್ಯವಾದ ಸಂಪನ್ಮೂಲ, ಈಗ ನೀರನ್ನು ಸಂರಕ್ಷಣೆ ಮಾಡಿದರೆ ಮಾತ್ರ ಮುಂದಿನ ಪೀಳಿಗೆಗೆ ನೀರು ಉಳಿಸಲು ಸಾಧ್ಯ. ಯುವ ಜನತೆ ತಾವು ಹೋಗುವ ಕಡೆ ಪರಿಸರ ಕಾಳಜಿ ವಹಿಸಬೇಕು, ಅದನ್ನು ಇತರರಿಗೂ ಸಾರಬೇಕು ಎಂದು ಹೇಳಿದರು.

*************

೨೦೪೭ ರ ವೇಳೆಗೆ ವಿಕಸಿತ ಭಾರತ ಗುರಿ ಸಾಧನೆಗೆ ೩೦ ಟ್ರಿಲಿಯನ್ ಆರ್ಥಿಕತೆ ಹೊಂದುವ ಸಾಧನೆಗೆ ವಿದ್ಯಾರ್ಥಿ ಸಮೂಹ ಮಹತ್ವದ ಕೊಡುಗೆ ನೀಡಬೇಕು ಎಂದು ಪ್ರಧಾನ ಮಂತ್ರಿಗಳ ಆರ್ಥಿಕ ಸಲಹಾ ಮಂಡಳಿಯ ಸದಸ್ಯ ಡಾ. ಕೆ. ವಿ ರಾಜು ಕರೆ ನೀಡಿದ್ದಾರೆ. ಐಬಿಎಸ್ ಬ್ಯುಸಿನೆಸ್ ಸ್ಕೂಲ್ ನ ೨ನೇ ಘಟಿಕೋತ್ಸವದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪದಕ ಪ್ರದಾನ ಮಾಡಿ ಮಾತನಾಡಿದ ಅವರು, ದೇಶದ ಪ್ರಸ್ತುತ ಜಿಡಿಪಿ ೪.೨ ಟ್ರಿಲಿಯನ್ ಡಾಲರ್ ನಷ್ಟಿದ್ದು, ಮುಂಬರುವ ದಿನಗಳಲ್ಲಿ ಮಹತ್ವದ

ಬದಲಾವಣೆ ಮತ್ತು ಸುಧಾರಣೆಗಳಿಗೆ ವಿದ್ಯಾರ್ಥಿ ಸಮುದಾಯ ತನ್ನನ್ನು ತೊಡಗಿಸಿಕೊಳ್ಳಬೇಕು ಎಂದರು.

*************

ವಿಶ್ವ ಪ್ರವಾಸೋದ್ಯಮ ದಿನಾಚರಣೆ ಅಂಗವಾಗಿ ಇಂದು ಕೊಪ್ಪಳದ ಗಗನ್ ಮಹಲದಿಂದ ಅಂಜನಾದ್ರಿ ಬೆಟ್ಟದವರೆಗೆ ಆಯೋಜಿಸಿದ್ದ ಪ್ಲಾಸ್ಟಿಕ್ ಬಳಕೆ ಮುಕ್ತ ಪಾರಂಪರಿಕ ನಡಿಗೆ ಕಾರ್ಯಕ್ರಮಕ್ಕೆ ಶಾಸಕ ಗಾಲಿ ಜನಾರ್ಧನರಡ್ಡಿ ಹಾಗೂ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ್ ಚಾಲನೆ ನೀಡಿದರು. ಜಿಲ್ಲಾಧಿಕಾರಿ ಡಾ.ಸುರೇಶ ಬಿ. ಇಟ್ನಾಳ ಮಾತನಾಡಿ, ಕಿಷ್ಕಿಂದಾ ಪ್ರದೇಶವನ್ನು ಪ್ಲಾಸ್ಟಿಕ್ ಮುಕ್ತ ಪ್ರದೇಶವನ್ನಾಗಿ ಮಾಡಿ ಪ್ರವಾಸೋದ್ಯವನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಹೇಳಿದರು.

*************